**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003**

ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಸೆಪ್ಟೆಂ-2020/22/2020-21

ದಿನಾಂಕ: 22.10.2020

ಗೆ,

ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ)
ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ

ಮಾನ್ಯರೆ

ವಿಷಯ:- ಸೆಪ್ಟೆಂಬರ್-2020ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳ ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ/ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

ಉಲ್ಲೇಖ:- ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ:16.10.2019

*******

ಸೆಪ್ಟೆಂಬರ್-2020ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳ ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ/ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ **ಆನ್‌ಲೈನ್ ಮುಖಾಂತರ** ಅರ್ಜಿ ಸಲ್ಲಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ದಿನಾಂಕವನ್ನು ನಿಗಧಿಪಡಿಸಲಾಗಿತ್ತು. ಆದರೆ ದಿನಾಂಕವನ್ನು ವಿಸ್ತರಣೆ ಮಾಡಬೇಕೆಂದು ದೂರವಾಣಿಯ ಮುಖಾಂತರ / ಖುದ್ದಾಗಿ ಕೆಲವು ಅಭ್ಯರ್ಥಿಗಳು/ಪೋಷಕರು ಹಾಗೂ ಶಾಲಾ ಮುಖ್ಯೋಪಾಧ್ಯಾಯರು ಮಂಡಳಿಗೆ ಮನವಿ ಮಾಡಿರುತ್ತಾರೆ.

ಈ ಸಂಬಂಧ ಕೆಳಕಂಡಂತೆ ದಿನಾಂಕವನ್ನು ವಿಸ್ತರಿಸಿದೆ. ಆದ್ದರಿಂದ ಅಭ್ಯರ್ಥಿಗಳು/ಪೋಷಕರು/ಶಾಲಾ ಮುಖ್ಯೋಪಾಧ್ಯಾಯರು ಅಂತಿಮ ದಿನಾಂಕದೊಳಗೆ ಸ್ಕ್ಯಾನ್‌ಪ್ರತಿ/ಮರುಎಣಿಕೆ/ಮೌರುಮೌಲ್ಯಪಾನಕ್ಕಾಗಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ ಇದರ ಸದುಪಯೋಗ ಪಡೆದುಕೊಳ್ಳಲು ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ) / ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಜಿಲ್ಲೆ/ತಾಲ್ಲೂಕಿನ ಸ್ಥಳೀಯ ದಿನಪತ್ರಿಕೆ ಹಾಗೂ ಇತರೆ ಮಾಧ್ಯಮಗಳ ಮೂಲಕ ಸದರಿ ವಿಷಯದ ಬಗ್ಗೆ ಶಾಲಾ ಮುಖ್ಯೋಪಾಧ್ಯಾಯರು/ಪೋಷಕರು/ವಿದ್ಯಾರ್ಥಿಗಳ ಗಮನಕ್ಕೆ ಬರುವಂತೆ ವ್ಯಾಪಕ ಪ್ರಚಾರವಾಗುವಂತೆ ಅಗತ್ಯ ಕ್ರಮ ಕೈಗೊಳ್ಳುವುದು.

| ವಿವರ | ಈ ಹಿಂದೆ ನಿಗದಿಪಡಿಸಿದ್ದ ದಿನಾಂಕ | **ವಿಸ್ತರಣೆ ಮಾಡಿದ ಕೊನೆಯ ದಿನಾಂಕ** |
|---|---|---|
| ಸೆಪ್ಟೆಂಬರ್ 2020ರ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು **ಅಂತಿಮ** ದಿನಾಂಕ | 21-10-2020 | **26-10-2020** |
| ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಿದ ನಂತರ ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕವನ್ನು ಬ್ಯಾಂಕಿಗೆ ಪಾವತಿಸಲು **ಅಂತಿಮ** ದಿನಾಂಕ: | 22-10-2020 | **27-10-2020** |
| ಸೆಪ್ಟೆಂಬರ್ 2020ರ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು **ಅಂತಿಮ** ದಿನಾಂಕ | 28-10-2020 | **02-11-2020** |
| ಸೆಪ್ಟೆಂಬರ್ 2020ರ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು **ಅಂತಿಮ** ದಿನಾಂಕ | 28-10-2020 | **02-11-2020** |
| ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ನಂತರ ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕವನ್ನು ಬ್ಯಾಂಕಿಗೆ ಪಾವತಿಸಲು **ಅಂತಿಮ** ದಿನಾಂಕ: | 29-10-2020 | **03-11-2020** |

(ಮಾನ್ಯ ನಿರ್ದೇಶಕರು ಅನುಮೋದಿಸಿದೆ)

ತಮ್ಮ ನಂಬುಗೆಯ,

ಕಾರ್ಯದರ್ಶಿಗಳು

ಪ್ರತಿಯನ್ನು:-
ಶಾಖಾಧಿಕಾರಿಗಳು ಗಣಕಶಾಖೆ, ಬಿ ಶಾಖೆ, ಸಿ ಶಾಖೆ ಮತ್ತು ಎಲ್ಲಾ ಪರಿಶೀಲನಾ ಶಾಖೆಗಳಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.

A8_letter1